# ಪ್ರಧಾನ ಸಿವಿಲ್ ಜಡ್ಜ್ ಮತ್ತು ಜೆ.ಎಂ.ಎಫ್.ಸಿ ನ್ಯಾಯಾಲಯ, ಹೊನ್ನಾಳಿ

## ಸಿ.ಸಿ.1915/2019

ಸಾಕ್ಷಿದಾರರ ಹೇಳಿಕೆಃ

| | | | | |
|---|---|---|---|---|
| **ಹೆಸರು** | : | ರಾಮಪ್ಪ ಎ ಕೆ | ಚಾಸಾಃ **8** | ಪ್ರಾಸಾಃ **9** |
| **ತಂದೆಯ ಹೆಸರು** | : | ಕೃಷ್ಣಪ್ಪ | | |
| **ವಯಸ್ಸು** | : | **34** ವರ್ಷ | | |
| **ವೃತ್ತಿ** | : | ವ್ಯವಸಾಯ | | |
| **ವಾಸಸ್ಥಳ** | : | ನರಸಗೊಂಡನಹಳ್ಳಿ | | |

ದಿನಾಂಕಃ **14-01-2026** ರಂದು ಸಾಕ್ಷಿಯನ್ನು ಕರೆದು ಪ್ರಮಾಣವಚನ ಬೋಧಿಸಲಾಯಿತು.

ಮುಖ್ಯ ವಿಚಾರಣೆ :-ಮಾನ್ಯ ಸ.ಸ.ಅ. ರವರಿಂದ:-

ಚಾಸಾ-1 ಗೊತ್ತು. ಚಾಸಾ-7 ಗೊತ್ತಿಲ್ಲ. ಈಗ್ಗೆ ಸುಮಾರು 8 ವರ್ಷಗಳ ಹಿಂದೆ ನಾಗಪ್ಪರವರಿಗೆ ಅಪಘಾತವಾದ ವಿಚಾರದಲ್ಲಿ ನರಸಗೊಂಡನಹಳ್ಳಿಯ ಬಸ್ ನಿಲ್ದಾಣದ ಬಳಿ ನನ್ನ, ಚಾಸಾ-1 ಮತ್ತು 7 ರವರ ಸಮಕ್ಷಮ ಪೊಲೀಸರು ಮಹಜರ್ ಕ್ರಮ ಜರುಗಿಸಿ, ಕಚ್ಚ ನಕಾಶೆಯನ್ನು ತಯಾರಿಸಿ, ಛಾಯಾಚಿತ್ರಗಳನ್ನು ತೆಗೆದಿರುತ್ತಾರೆ.

ಸ್ಥಳ ಮಹಜರ್ ಅನ್ನು ಈಗಾಗಲೇ ನಿಪಿ-3 ಎಂದು ಗುರುತಿಸಿದ್ದು, ಸಾಕ್ಷಿಯ ಸಹಿಯನ್ನು ನಿಪಿ-3(ಬಿ) ಎಂದು, ಕಚ್ಚ ನಕಾಶೆಯನ್ನು ಈಗಾಗಲೇ ನಿಪಿ-4 ಎಂದು ಗುರುತಿಸಿದ್ದು, ಸಾಕ್ಷಿಯ ಸಹಿಯನ್ನು ನಿಪಿ-4(ಬಿ) ಎಂದು, ನಿಪಿ-5 ಮತ್ತು 6 ಛಾಯಾಚಿತ್ರಗಳನ್ನು ಸಾಕ್ಷಿ ನೋಡಿ ಗುರುತಿಸಿರುತ್ತಾರೆ.

ಸದರಿ ಸಾಕ್ಷಿಯನ್ನು ಭಾಗಶಃ ಪ್ರತಿಕೂಲ ಸಾಕ್ಷಿ ಎಂದು ಪರಿಗಣಿಸಿ ಪಾಟೀ ಸವಾಲು ಮಾಡಲು ಮಾನ್ಯ ಸ.ಸ.ಅ.

ರವರು ಅನುಮತಿ ಕೋರಿದ್ದಾರೆ. ಸೂಕ್ತ ಕಾರಣ ನೀಡಿದ ಮೇರೆಗೆ ಅನುಮತಿ ನೀಡಲಾಗಿದೆ.

ಪಾಟೀ ಸವಾಲು :- ಮಾನ್ಯ ಸ.ಸ.ಅ. ರವರಿಂದ:-

ಮಹಜರ್ ಅನ್ನು ಪೊಲೀಸರು ಬೆಳಗ್ಗೆ 10-30 ರಿಂದ 11-30 ಗಂಟೆ ಸಮಯದಲ್ಲಿ ಮಾಡಿದ್ದಾರೆ ಎಂದರೆ ಸರಿ. ಮಹಜರ್ ಅನ್ನು ದಿಃ 28-05-2019 ರಂದು ಮಹಜರ್ ಮಾಡಿದ್ದಾರೆ ಎಂದರೆ ಸರಿ. ದಿಃ 29-05-2019 ರಂದು ಹೊನ್ನಾಳಿ ಪೊಲೀಸ್ ಠಾಣೆಯ ಆವರಣದಲ್ಲಿ ನನ್ನ, ಚಾಸಾ-1 ಮತ್ತು 7 ರವರ ಸಮಕ್ಷಮ ಬೆಳಗ್ಗೆ 09-30 ರಿಂದ 10-30 ಗಂಟೆ ಸಮಯದಲ್ಲಿ ಅಮಾನತ್ತು ಮಹಜರ್ ಕ್ರಮ ಜರುಗಿಸಿ ಕೆಎ-17/ಇವೈ-2153 ಮೋಟಾರ್ ಸೈಕಲ್ ಮತ್ತು ಟಿ ವಿ ಎಸ್ ಪೆಪ್ಟ್ ಸ್ಕೂಟಿಯನ್ನು ಅಮಾನತ್ತು ಪಡಿಸಿಕೊಂಡು ಅಮಾನತ್ತು ಮಹಜರ್ ಕ್ರಮ ಜರುಗಿಸಿ, ಛಾಯಾಚಿತ್ರಗಳನ್ನು ತೆಗೆದಿದ್ದಾರೆ ಎಂದರೆ ಸರಿ. ಮಹಜರ್ ಸಮಯದಲ್ಲಿ ಪೊಲೀಸರಿಂದ ನೋಟೀಸನ್ನು ಪಡೆದುಕೊಂಡಿದ್ದೇನೆ ಎಂದರೆ ಸರಿ. ಈ ಬಗ್ಗೆ ಪೊಲೀಸರಿಗೆ ಹೇಳಿಕೆ ಮತ್ತು ಮರುಹೇಳಿಕೆಯನ್ನು ಕೊಟ್ಟಿದ್ದೇನೆ ಎಂದರೆ ಸರಿ.

ಅಮಾನತ್ತು ಮಹಜರ್ ಅನ್ನು ಈಗಾಗಲೇ ನಿಪಿ-10 ಎಂದು ಗುರುತಿಸಿದ್ದು, ಸಾಕ್ಷಿಯ ಸಹಿಯನ್ನು ನಿಪಿ-10(ಬಿ) ಎಂದು, ನಿಪಿ-11 ಮತ್ತು 12 ಛಾಯಾಚಿತ್ರಗಳನ್ನು ಸಾಕ್ಷಿ ನೋಡಿ ಗುರುತಿಸಿರುತ್ತಾರೆ. ಮಹಜರ್ ಸಮಯದಲ್ಲಿ ನೀಡಿದ ನೋಟೀಸನ್ನು ಈಗಾಗಲೇ ನಿಪಿ-30 ಎಂದು ಗುರುತಿಸಿದ್ದು, ಸಾಕ್ಷಿಯ ಸಹಿಯನ್ನು ನಿಪಿ-30(ಬಿ) ಎಂದು, ಅಮಾನತ್ತು ಮಹಜರ್ ಸಮಯದಲ್ಲಿ ನೀಡಿದ ನೋಟೀಸನ್ನು ಈಗಾಗಲೇ ನಿಪಿ-31 ಎಂದು ಗುರುತಿಸಿದ್ದು, ಸಾಕ್ಷಿಯ ಸಹಿಯನ್ನು ನಿಪಿ-31(ಬಿ) ಎಂದು ಗುರುತಿಸಲಾಯಿತು.

ಪಾಟೀ ಸವಾಲು :- ಆರೋಪಿ ಪರ ವಕೀಲರಿಂದಃ-

ನಿಪಿ-3 ಸ್ಥಳ ಮಹಜರ್, ನಿಪಿ-10 ಅಮಾನತ್ತು ಮಹಜರ್ ಮತ್ತು ನಿಪಿ-4 ಕಚ್ಚ ನಕಾಶೆಯಲ್ಲಿ ಬರೆದಿರುವ ವಿಚಾರಗಳು ನನಗೆ ಗೊತ್ತಿಲ್ಲ ಎಂದರೆ ಸರಿ. ನನಗೆ ಈ ಪ್ರಕರಣದ ಬಗ್ಗೆ ಯಾವುದೇ ಮಾಹಿತಿ ಗೊತ್ತಿಲ್ಲದಿದ್ದರೂ ಸಹ ಪೊಲೀಸರ ಮಾತುಕೇಳಿಕೊಂಡು ಸುಳ್ಳು ಸಾಕ್ಷಿ ಹೇಳುತ್ತಿದ್ದೇನೆ ಎಂದರೆ ಸರಿಯಲ್ಲ.

ಮರುವಿಚಾರಣೆ ಇಲ್ಲ.

ಸಾ. ಹೇ. ತೆ. ನ್ಯಾ. ಬೆ. ಮಾಡಿಸಲಾಯಿತು.

ಓ. ಹೇ. ಕೇ. ಸ. ಇದೆ.

ಪ್ರಧಾನ  ಸಿವಿಲ್ ನ್ಯಾಯಾಧೀಶರು ಮತ್ತು
ಜೆ.ಎಂ.ಎಫ್.ಸಿ., ಹೊನ್ನಾಳಿ.